<u>ದಿನಾಂಕಃ **07.02.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಮಾಡಿಸಲಾಯಿತು.</u>

<u>ಮುಂದುವರೆದ ಮುಖ್ಯವಿಚಾರಣೆಃ ವಾದಿ ಪರ ಶ್ರೀ ಬಿ ಸಿ ವಿ ಎಸ್ ವಕೀಲರಿಂದಃ</u>

ನಾನು ಈ ದಿನ ಭಾರತೀಯ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಇದರ ಪಾಸ್ ಪುಸ್ತಕದ ಪ್ರತಿಯನ್ನು ಹಾಜುರಪಡಿಸಿದ್ದು ಅದನ್ನು ನಿಪಿ- 34 ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ- 34 ರಲ್ಲಿ ದಿನಾಂಕ 23-07-2018 ರಂದು ರೂ. 40 ಲಕ್ಷವನ್ನು ಚೆಕ್ ಮುಖಾಂತರ 1 ನೇ ಪ್ರತಿವಾದಿ ಇವರ ಖಾತೆಗೆ ಹಣ ವರ್ಗಾವಣೆ ಮಾಡಿದ ಭಾಗವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ - 34(ಎ) ಎಂದು ಗುರುತಿಸಲಾಯಿತು. ನಾನು ಈ ದಿನ ಕರ್ನಾಟಕ ಬ್ಯಾಂಕ್ ಇದಕ್ಕೆ ಸಂಬಂಧಿಸಿದ ಪಾಸ್ ಪುಸ್ತಕವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 35 ಎಂದು ಗುರುತಿಸಲಾಯಿತು.ಸಾಕ್ಷಿ ನಿಪಿ- 35 ರಲ್ಲಿ ದಿನಾಂಕ 15-02-2019 ರಂದು ರೂ.20 ಲಕ್ಷ ಹಣವನ್ನು ಚೆಕ್ ಮುಖಾಂತರ 1 ನೇ ಪ್ರತಿವಾದಿಗೆ ವರ್ಗಾವಣೆ ಮಾಡಿದ ಭಾಗವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಸದರಿ ಭಾಗವನ್ನು ನಿಪಿ- 35(ಎ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ- 35 ರಲ್ಲಿ ದಿನಾಂಕ 23.03.2019 ರಂದು ರೂ.10 ಲಕ್ಷ ಹಣವನ್ನು 1 ನೇ ಪ್ರತಿವಾದಿಗೆ ಹಾಗೂ ದಿನಾಂಕ 25.03.2019 ರಂದು 5 ನೇ ಪ್ರತಿವಾದಿಗೆ ರೂ. 10 ಲಕ್ಷವನ್ನು ವರ್ಗಾವಣೆ ಮಾಡಿದ ಭಾಗವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ- 35 (ಬಿ) ಮತ್ತು (ಸಿ) ಎಂದು ಗುರುತಿಸಲಾಯಿತು. ಕರ್ನಾಟಕ ಬ್ಯಾಂಕ್ ಇದಕ್ಕೆ ಸಂಬಂಧಿಸಿದ ಪಾಸ್ ಪುಸ್ತಕವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 36 ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ- 36 ರಲ್ಲಿ ದಿನಾಂಕ 06-07-2019 ರಂದು ರೂ.80 ಲಕ್ಷ ಹಣವನ್ನು ಚೆಕ್ ಮುಖಾಂತರ 1 ನೇ ಪ್ರತಿವಾದಿಗೆ ವರ್ಗಾವಣೆ ಮಾಡಿದ ಭಾಗವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ- 36(ಎ) ಎಂದು ಗುರುತಿಸಲಾಯಿತು. ಆದುದರಿಂದ ನಾನು ಈ ದಾವೆಯಲ್ಲಿ ಕೇಳಿದ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

<u>ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರು ಸಮಯ ಕೋರಿದ್ದು, ಸಮಯ ನೀಡಲಾಯಿತು.</u>

<u>ಮರುವಿಚಾರಣೆಃ ಇಲ್ಲಃಃ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

Sd/-xxx
ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ,
ಸಂಚಾರಿ ನ್ಯಾಯಾಲಯ, ಕೊಪ್ಪ.

ಸಾಕ್ಷಿದಾರರ ಸಹಿಃ